# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಕೋವಿಡ್-19ರ ಸಲುವಾಗಿ ಪಿ.ಪಿ.ಇ. ಕಿಟ್ ಧರಿಸಿ ಕಾರ್ಯ ನಿರ್ವಹಿಸುತ್ತಿರುವ ಗ್ರೂಪ್-ಡಿ ನೌಕರರಿಗೆ ಪ್ರೋತ್ಸಾಹಧನವನ್ನು ನೀಡುವ ಬಗ್ಗೆ.

******

**ಪ್ರಸ್ತಾವನೆ:**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಕೋವಿಡ್ ಹೆಲ್ತ್ ಸೆಂಟರ್, ಕೋವಿಡ್ ಆಸ್ಪತ್ರೆ ಮತ್ತು ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಕೋವಿಡ್-19ರ ಸಲುವಾಗಿ ಪಿ.ಪಿ.ಇ. ಕಿಟ್ ಧರಿಸಿ ಕಾರ್ಯ ನಿರ್ವಹಿಸುತ್ತಿರುವ ಗ್ರೂಪ್-ಡಿ ನೌಕರರುಗಳಿಗೆ ಉತ್ತೇಜನ ನೀಡುವ ಸಲುವಾಗಿ ಮಾಸಿಕ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಕೋವಿಡ್ ರಿಸ್ಕ್ ಪ್ರೋತ್ಸಾಹಧನ (Covid Risk Incentive)ವನ್ನು ಮುಂದಿನ 06 ತಿಂಗಳುಗಳಿಗೆ ಅಥವಾ ಮುಂದಿನ ಆದೇಶದವರೆಗೆ ನೀಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಆಕುಕ 01 ಸಿ&ಆರ್ 2020**

**ಬೆಂಗಳೂರು, ದಿನಾಂಕ: 14-07-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಕೋವಿಡ್ ಹೆಲ್ತ್ ಸೆಂಟರ್, ಕೋವಿಡ್ ಆಸ್ಪತ್ರೆ ಮತ್ತು ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಕೋವಿಡ್-19ರ ಸಲುವಾಗಿ ಪಿ.ಪಿ.ಇ. ಕಿಟ್ ಧರಿಸಿ ಕಾರ್ಯ ನಿರ್ವಹಿಸುತ್ತಿರುವ ಗ್ರೂಪ್-ಡಿ ನೌಕರರುಗಳಿಗೆ ಮಾಸಿಕ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಕೋವಿಡ್ ರಿಸ್ಕ್ ಪ್ರೋತ್ಸಾಹಧನ (Covid Risk Incentive) ವನ್ನು ಮುಂದಿನ 06 ತಿಂಗಳುಗಳಿಗೆ ಅಥವಾ ಮುಂದಿನ ಆದೇಶದವರೆಗೆ ನೀಡಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 250 ವೆಚ್ಚ-5 2020, ದಿನಾಂಕ:14/07/2020 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಯ. ಶಿವಶಂಕರ್) 14/7/2020
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

ಇವರಿಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
4) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
5) ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)

6) ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)

7) ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)

8) ಮುಖ್ಯ ಆಡಳಿತಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.

9) ಮುಖ್ಯ ಲೆಕ್ಕಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.

10) ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ) (ವೆಚ್ಚ–5), ವಿಧಾನ ಸೌಧ, ಬೆಂಗಳೂರು.

11) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿಯನ್ನು:</u>

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಆ.ಕು.ಕ. ಇಲಾಖೆ, ವಿಕಾಸ ಸೌಧ., ಬೆಂಗಳೂರು

2) ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕು.ಕ. ಇಲಾಖೆ, ವಿಕಾಸ ಸೌಧ, ಬೆಂಗಳೂರು.